# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75,
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.

ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-04/2021-22

ದಿನಾಂಕ: 15/05/2021

**-:ಸಭೆಯ ನಡವಳಿಗಳು:-**

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 15/05/2021 ಶನಿವಾರದಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಪುಟ್ಟಸ್ವಾಮಿ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಭಂದಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ಮಾನ್ಯ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

ಸಭೆಯಲ್ಲಿ ಹಾಜರಿದ್ದವರು:

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ಪುಟ್ಟಸ್ವಾಮಿ, ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ವಾರ್ಡ್-75, ಬಿಬಿಎಂಪಿ |
| 3 | ಶ್ರೀಮತಿ ಡಾ. ಕುಸುಮ, ಮೆಡಿಕಲ್ ಹೆಲ್ತ್ ಆಫಿಸರ್, ಬಿಬಿಎಂಪಿ. |
| 4 | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ |
| 5 | ಶ್ರೀ ಸಂತೋಷ್, ಸಹಾಯಕ ಅಭಿಂತರರು, ಬೃನೀ.ಗಾ. ವಿಭಾಗ (ಪಶ್ಚಿಮ), ಬಿಬಿಎಂಪಿ. |
| 6 | ಶ್ರೀ ಕೆ.ವಿ.ಲೋಕೇಶ್, ಹಿರಿಯ ವೆಟರಿನರಿ ಪರಿವೀಕ್ಷಕರು, ಬಿಬಿಎಂಪಿ. |
| 7 | ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 8 | ಶ್ರೀ ಸುನೀಲ್ ಕುಮಾರ್ ಕೆ.ಎಸ್., ಕಂದಾಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 9 | ಶ್ರೀ ಅನೀಲ್ ಕುಮಾರ್ ಕೆ.ಎಲ್., ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 10 | ಶ್ರೀಮತಿ ದೀಪಾ ಜೆ., ಸಹಾಯಕ ಅಭಿಯಂತರರು, ಕೊಳಚೆ ನೀರು ನಿರ್ವಹಣೆ ವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 11 | ಶ್ರೀ ಶೇಖರ್ ನಾಯಕ್, ಸಹಾಯಕ ಅಭಿಯಂತರರು, ಎನ್.ಡಬ್ಲ್ಯೂ-2, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 12 | ಶ್ರೀ ಶಂಕರ್ ರಾಜ್, ಸಹಾಯಕ ಅಭಿಯಂತರರು, ಎನ್-3, ಬೆಸ್ಕಾಂ. |
| 13 | ಬರಡೀ ಶಿವಪ್ಪ, ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯೂ-1, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 14 | ಶ್ರೀ ಹೆಚ್.ಎನ್. ರಮೇಶ್, ಎ.ಎಸ್.ಐ. ಮಹಾಲಕ್ಷ್ಮೀಪುರಂ ಪೊಲೀಸ್ ಠಾಣೆ. |
| 15 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ವಾರ್ಡ್-75, ಬಿಬಿಎಂಪಿ. |
| 16 | ಶ್ರೀ ಅಬ್ದುಲ್, ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರು. |
| 17 | ಶ್ರೀಮತಿ ಲೋಕೇಶ್ವರಿ, ಶಿಕ್ಷಕರು, ಕೋವಿಡ್ ಸೋಂಕಿತರ ಸಂಪರ್ಕಿತರನ್ನು ಪತ್ತೇ ಹಚ್ಚುವವರು. |
| 18 | ಶ್ರೀ ವಿನಯ್, ನಾಗರೀಕರು ವಾರ್ಡ್-75 |
| 19 | ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 20 | ಶ್ರೀ ಸುಬ್ರಮಣಿ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 21 | ಶ್ರೀ ಎಮ್. ನಾಗರಾಜ್, ವಾರ್ಡ್‌ನ ನಾಗರೀಕರು, ವಾರ್ಡ್-75. |

ಪು.ತಿ.ನೋ.

Scanned by CamScanner

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

1 **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ➢ ಶ್ರೀ ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19ಗೆ ಸಂಬಂಧಿಸಿದಂತೆ ಯೋಗಕೇಂದ್ರದಲ್ಲಿ 45 ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ 2ನೇ ಡೋಸ್ ವ್ಯಾಕ್ಸಿನೇಷನ್ ನೀಡಲಾಗುತ್ತಿದೆ. ಮತ್ತು ಕಾವೇರಿನಗರದ ಪೈಪ್‌ಲೈನ್ ಉದ್ಯಾನವನದಲ್ಲಿ ಕೋವಿಡ್-19 ಸೋಂಕಿತರನ್ನು ಪತ್ತೆಹಚ್ಚಲು ಪರೀಕ್ಷೆಗಳನ್ನು ಕೈಗೊಳ್ಳಲಾಗುತ್ತಿ ಎಂದು ಸಭೆಯಲ್ಲಿ ತಿಳಿಸಿದರು.
- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಕೋವಿಡ್-19 ಸೋಂಕಿತರೊಂದಿಗಿನ ಸಂಪರ್ಕಿತರನ್ನು ಪತ್ತೆಹಚ್ಚುವ ಕಾರ್ಯದ ಬಗ್ಗೆ ಮಾಹಿತಿ ನೀಡುವಂತೆ ಹೇಳಿದರು.
- ➢ ಶ್ರೀಮತಿ ಲೋಕೇಶ್ವರಿ, ಮೇಲ್ವಿಚಾರಕರು, ಕಾಂಟ್ಯಾಕ್ಟ್ ಟ್ರೇಸಿಂಗ್ ಗ್ರೂಪ್, ವಾರ್ಡ್-75 ರವರು ಮಾತನಾಡುತ್ತಾ, ಹೋಮ್ ಐಸೋಲೇಷನ್‌ನಲ್ಲಿರುವವರ ಮಾಹಿತಿಗಳನ್ನು ಪಾಲಿಕೆಯ ಆಪ್‌ನಲ್ಲಿ ಅಪ್‌ಡೇಟ್ ಮಾಡುವುದು ಕಷ್ಟಕರವಾಗಿರುತ್ತದೆ. ಮತ್ತು ಕೋವಿಡ್-19 ಸೋಂಕಿತರ ಸಂಪರ್ಕಿತರನ್ನು ದೂರವಾಣಿಯ ಮುಖಾಂತರ ಸಂಪರ್ಕಿಸಿ ಅವರ ಆರೋಗ್ಯದ ಬಗ್ಗೆ ವಿಚಾರಿಸಲಾಗುತ್ತಿದ್ದು, ಮುಂಜಾಗ್ರತೆಯ ಬಗ್ಗೆ ಎಚ್ಚರಿಸಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

2 **ಅಭಿಯಂತರರ ವಿಭಾಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾಟ್ಸ್ ಆಪ್ ಗ್ರೂಪ್‌ನಲ್ಲಿ ನಿನ್ನೆ ದಿನ ಮಳೆಯಿಂದಾಗಿ ಲಕ್ಷ್ಮೀನಗರದ 1ನೇ ಅಡ್ಡರಸ್ತೆಯಲ್ಲಿ ಮಳೆ ನೀರು ಹೆಚ್ಚಾಗಿ ಹರಿದು ಬಂದು ಅದರೊಂದಿಗೆ ಮ್ಯಾನ್‌ಹೋಲ್‌ನಿಂದ ಓವರ್ ಪ್ಲೋ ಆಗಿ ಕೊಳಚೆ ನೀರು ಕೂಡ ಸೇರುವುದರಿಂದ ಸಾರ್ವಜನಿಕರಿಗೆ ಕೊಳಕು ವಾಸನೆ ಹಾಗೂ ಮನೆಯ ಮುಂದೆ ಕೊಳಚೆ ನಿಂತಿರುವುದಾಗಿ ದೂರು ನೀಡಿರುತ್ತಾರೆ, ಇದಕ್ಕೆ ಸಂಬಂಧಿಸಿದಂತೆ ತೆಗೆದುಕೊಮಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ➢ ಸಹಾಯಕ ಅಭಿಂಯಂತರರು ಮಾತನಾಡುತ್ತಾ, ಸದರಿ ರಸ್ತೆಗಳಲ್ಲಿ ರಸ್ತೆ ಬದಿಯ ಚರಂಡಿಗಳು ಕ್ಲಿಯರ್ ಆಗಿದ್ದು, ಎಸ್.ವಿ.ಕೆ. ಬಡಾವಣೆಯ ಕಡೆಗಿನ ಚರಂಡಿಯಲ್ಲಿ ಸಿಲ್ಟ್ ಇದ್ದುದರಿಂದ ಅದನ್ನು ತೆರವುಗೊಳಿಸಿ ನೀರು ಸುಗಮವಾಗಿ ಹರಿಯುವಂತೆ ಮಾಡಲಾಗಿದ್ದು, ಅದನ್ನು ವಾಟ್ಸ್‌ಆಪ್‌ನಲ್ಲಿ ವರದಿ ಮಾಡಲಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

3 **ವಿದ್ಯುತ್ ವಿಭಾಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾಟ್ಸ್ ಆಪ್ ಗ್ರೂಪ್‌ನಲ್ಲಿ ಕಳೆದ ದಿನಗಳಲ್ಲಿ ಶ್ರೀಸುಬ್ರಮಣಿ ವಾರ್ಡ್‌ನ ನಾಗರೀಕರು ವಾರ್ಡ್ ವ್ಯಾಪ್ತಿಯ ಲಕ್ಷ್ಮೀನಗರದ ಶನಿ ಮಹಾತ್ಮ ದೇವಸ್ಥಾನದ ಬಳಿಯಿರುವ ಬೀದಿ ದೀಪಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ➢ ಶ್ರೀ ಅಬ್ದುಲ್, ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರು ರವರು ಮಾತನಾಡುತ್ತಾ, ಸದರಿ ಸ್ಥಳವನ್ನು ಪರಿಶೀಲಿಸಲಾಗಿದ್ದು, ಈಗಾಗಲೇ ಬಗೆಹರಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು.

4 **ಪಶುಪಾಲನೆ ವಿಭಾಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳನ್ನು ನಿಯಂತ್ರಿಸಲು ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ ಲೋಕೇಶ್ ಕೆ.ವಿ. ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ತಿಳಿಸಿದರು.
- ➢ ಶ್ರೀ ಲೋಕೇಶ್ ಕೆ.ವಿ. ಹಿರಿಯ ವೆಟರಿನರಿ ಪರಿವೀಕ್ಷಕರು ರವರು ಮಾತನಾಡುತ್ತಾ, ಬೀದಿ ನಾಯಿಗಳಿಗೆ ಸಂಬಂಧಿಸಿದಂತೆ ದೂರುಗಳು ಬಂದ ತಕ್ಷಣ ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯಚರಣೆ ನಡೆಸಲಾಗುತ್ತಿದ್ದು, ಪ್ರತಿ ಬಾರಿ ಕಾರ್ಯಾಚರಣೆ ಕೈಗೊಂಡಾಗ ವಾಟ್ಸ್‌ಆಪ್‌ನಲ್ಲಿ ವರದಿ ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

5 **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ದೂರುಗಳು ಬಾರದಂತೆ ಸರಿಯಾದ ರೀತಿಯಲ್ಲಿ ತ್ಯಾಜ್ಯಗಳನ್ನು ಸಂಗ್ರಹಿಸುವುದು ಹಾಗೂ ನಿರ್ವಹಣೆ ಮಾಡಲು ಕಿರಿಯ ಆರೋಗ್ಯ ಪರಿವೀಕ್ಷಕರು ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

6 **ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಲಕ್ಷ್ಮೀನಗರದ ನಿವಾಸಿಗಳ ದೂರಿಗೆ ಸಂಬಂಧಿಸಿದಂತೆ ಮ್ಯಾನ್‌ಹೋಲ್‌ನಿಂದ ಕೊಳಚೆ ನೀರು ಓವರ್‌ಫ್ಲೋ ಆಗಿ ಹರಿಯುತ್ತಿರುವುದನ್ನು ತಡೆಯಲು ತೆಗೆದುಕೊಂಡಿರುವ ಕ್ರಮದ ತಿಳಿಸುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀಮತಿ ದೀಪಾ ಜೆ. (ಕೊಳಚೆ ನೀರು ನಿರ್ವಹಣೆ ವಿಭಾಗ) ರವರಿಗೆ ತಿಳಿಸಿದರು.
- ➢ ಶ್ರೀಮತಿ ದೀಪಾ ಜೆ. (ಕೊಳಚೆ ನೀರು ನಿರ್ವಹಣೆ ವಿಭಾಗ) ರವರು ಮಾತನಾಡುತ್ತಾ, ಸದರಿ ಸ್ಯಾನಿಟರಿ ಲೈನ್ ಸಬ್‌ಲೈನ್ ಆಗಿದ್ದು, ಕಿರ್ಲೋಸ್ಕರ್ ಕಾಲೋನಿ 1ನೇ ಹಂತದಿಂದ ಶುರುವಾಗಿ ಲಾವಣ್ಯ ಸ್ಟೋರ್ ರಸ್ತೆಯ ಮುಖಾಂತರ ಹರಿದು ವೃಷಭಾವತಿ ಬೃ.ನೀ.ಗಾ.ಯನ್ನು ಸೇರುತ್ತದೆ. ಸದರಿ ಲೈನ್‌ನಲ್ಲಿ ಹೆಚ್ಚಾಗಿ ಎಲ್ಲಾ ತಿರುವುಗಳು 90 ಡಿಗ್ರಿ ಆಗಿರುವುದರಿಂದ ನೀರಿನ ಹರಿಯುವಿಕೆಯ ವೆಲಾಸಿಟಿಯು ಕಡಿಮೆಯಾಗುತ್ತಿರುತ್ತದೆ ಇದರಿಮದಾಗಿ ಬ್ಯಾಕ್‌ಅಪ್ ಆಗಿ ನೀರು ಸದರಿ ಮ್ಯಾನ್‌ಹೋಲ್‌ನಿಂದ ನೀರು ಉಕ್ಕುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ಸಮಸ್ಯೆಯನ್ನು ಬಗೆಹರಿಸಲು ಯಾವುದಾದರೂ ಉಪಾಯವಿದ್ದರೆ ತಿಳಿಸುವಂತೆ ಶ್ರೀಮತಿ ದೀಪಾ ಜೆ. (ಕೊಳಚೆ ನೀರು ನಿರ್ವಹಣೆ ವಿಭಾಗ) ರವರಿಗೆ ಸಭೆಯಲ್ಲಿ ತಿಳಿಸಿದರು.
- ➢ ಶ್ರೀಮತಿ ದೀಪಾ ಜೆ. (ಕೊಳಚೆ ನೀರು ನಿರ್ವಹಣೆ ವಿಭಾಗ) ರವರು ಮಾತನಾಡುತ್ತಾ, ಸೋಮವಾರದಂದು ಸರ್ವೆಯರ್ ಅನ್ನು ಸದರಿ ಸ್ಥಳಕ್ಕೆ ಕರೆತಂದು ವಾರ್ಡ್‌ನ ಸಹಾಯಕ ಅಭಿಯಂತರರು, ಸಹಾಯಕ ಅಭಿಯಂತರರು, ಬೃ.ನೀ.ಗಾ. ಹಾಗೂ ಎಲ್ಲಾ ಅಧಿಕಾರಿಗಳ ಸಮಕ್ಷಮಲ್ಲಿ ಜಂಟಿಯಾಗಿ ಪರಿಶೀಲನೆ ನಡೆಸಿ ಮುಂದಿನ ಕ್ರಮವನ್ನು ತೆಗೆದುಕೊಳ್ಳಬಹುದಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಟಿಪ್ಪಣಿಯೊಂದಿಗೆ ದಾಖಲಾತಿಗಳನ್ನು ದೃಢೀಕರಿಸಿ ಕಡತದಲ್ಲಿ ತಪ್ಪದೇ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ: 75

**ಪ್ರತಿಯನ್ನು :-**

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.

ಪು.ತಿ.ನೋ.

Scanned by CamScanner

11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner



Scanned by CamScanner






S-46, 5th Cross Rd, Teacher's Colony, Basaveshwar Nagar, Bengaluru, Karnataka 560079, India

Bengaluru
Karnataka
India

2021-05-15(Sat) 12:29

Scanned by CamScanner